ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 287(614)

ಶ್ರೀ ಸೋಮಪ್ಪ ಸುವರ್ಣ (ಮೂಡಬಿದರೆ)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ತರಬೇತಿ ಹೊಂದಿದ ಸಾವಿರಾರು ಅಧ್ಯಾಪಕರು ಉದ್ಯೋಗಕ್ಕಾಗಿ ಕಾಯುತ್ತಿರುವಾಗ ನಿವೃತ್ತ ಅಧ್ಯಾಪಕರ ನೇಮಕ ಮಾಡಲು ಕಾರಣವೇನು;

ಆ. ನಿವೃತ್ತ ಅಧ್ಯಾಪಕರನ್ನು ಗುತ್ತಿಗೆ ಆಧಾರದಲ್ಲಿ ನೇಮಕ ಮಾಡುವಾಗ ನಿರುದ್ಯೋಗಿ ಅಧ್ಯಾಪಕರಿಗೆ ಉದ್ಯೋಗದ ಅವಕಾಶ ತಟ್ಟುತ್ತದೆ ಎಂಬ ವಿಚಾರ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲವೇ?

ಇ. ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರದವರು ಕೂಡಲೇ ಕ್ರಮ ಕೈಗೊಳ್ಳುವರೇ?

ಶ್ರೀಮತಿ ನಾಗಮ್ಮ ಸಿ.ಕೇಶವಮೂರ್ತಿ

(ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು)

ನಿವೃತ್ತ ಅಧ್ಯಾಪಕರನ್ನು ನೇಮಕ ಮಾಡುತ್ತಿಲ್ಲ

ಉದ್ಭವಿಸುವುದಿಲ್ಲ

ಉದ್ಭವಿಸುವುದಿಲ್ಲ.

ವಿಷಯ : - ನಿಟ್ಟೂರು ಗ್ರಾಮದ ವಡ್ಡರ ಮಾಡು ಹಳ್ಳಿಗಟ್ಟು ಅರಣ್ಯದ ಹರಿಜನ ಗಿರಿಜನರನ್ನು ಒಕ್ಕಲೆಬ್ಬಿಸುವ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 289(302)

ಶ್ರೀಮತಿ ಸುಮಾ ವಸಂತ (ವಿರಾಜಪೇಟೆ)

ಮಾನ್ಯ ಅರಣ್ಯ ರಾಜ್ಯಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ವಿರಾಜಪೇಟೆ ತಾಲ್ಲೂಕು ನಿಟ್ಟೂರು ಗ್ರಾಮದ ವಡ್ಡರ ಮಾಡು "ಹತ್‌ಗಟ್" ಪ್ರದೇಶದ ಹರಿಜನ ಗಿರಿಜನರನ್ನು ಅರಣ್ಯದಿಂದ ಒಕ್ಕಲೆಬ್ಬಿಸುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ)ಈ ಬಗ್ಗೆ ಸಾರ್ವಜನಿಕರಿಂದ ಪ್ರತಿಭಟನೆ ಬಂದಿದೆಯೇ?

ಇ)ಆ ಬಗ್ಗೆ ಸರ್ಕಾರವು ತೆಗೆದಕೊಂಡ ಕ್ರಮಗಳೇನು?

ಶ್ರೀ ಎಂ.ಪಿ.ಕೇಶವಮೂರ್ತಿ

(ಅರಣ್ಯ ರಾಜ್ಯ ಸಚಿವರು)

ಇಲ್ಲ.

ಇಲ್ಲ.

ಉದ್ಭವಿಸುವುದಿಲ್ಲ.

ವಿಷಯ : - ಜಿಲ್ಲಾಗ್ರಂಥಾಲಯಗಳ ಸಮಿತಿಗಳ ನೇಮಕಾತಿ